ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 7/1/2021

## ಜನವರಿಯಲ್ಲಿಲ್ಲ ಜಂಟಿ ಅಧಿವೇಶನ ?

7/1/21

ಬೆಂಗಳೂರು: ಜ.18 ರಂದು ಜಂಟಿ ಅಧಿವೇಶನ ನಡೆಸಲು ಚಿಂತನೆ ನಡೆಸಿದ್ದ ಸರ್ಕಾರ ಸದ್ಯಕ್ಕೆ ಫೆಬ್ರವರಿವರೆಗೂ ಅಧಿವೇಶನ ನಡೆಸದಿರಲು ಮುಂದಾಗಿದೆ ಎಂದು ತಿಳಿದು ಬಂದಿದೆ.

ಕಳೆದ ಸಚಿವ ಸಂಪುಟ ಸಭೆಯಲ್ಲಿ 18 ರಿಂದ ಒಂದು ವಾರ ಜಂಟಿ ಅಧಿವೇಶನ ನಡೆಸುವ ಕುರಿತು ಅನೌಪಚಾರಿಕ ಚರ್ಚೆ ನಡೆಸಿ, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅಧಿಕೃತ ದಿನಾಂಕ ಪ್ರಕಟಿಸಲು ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿತ್ತು. ಆದರೆ, ರಾಜ್ಯ ಸರ್ಕಾರ ಜನವರಿಯಲ್ಲಿ ಅಧಿವೇಶನ ನಡೆಸುವ ಬದಲು ಫೆಬ್ರವರಿ ಎರಡನೇ ವಾರದಲ್ಲಿ ಜಂಟಿ ಅಧಿವೇಶನ ನಡೆಸಿ, ಒಂದು ವಾರದ ನಂತರ ಬಜೆಟ್ ಅಧಿವೇಶನ ನಡೆಸಲು ತೀರ್ಮಾನಿಸಿದೆ ಎಂದು ತಿಳಿದು ಬಂದಿದೆ.